18.07.2025 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><*<><>*><>

## ಮುಖ್ಯಾಂಶಗಳು

- ಪಶ್ಚಿಮ ಬಂಗಾಳದಲ್ಲಿಂದು ಐದು ಸಾವಿರ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ಶಂಕುಸ್ಥಾಪನೆ
- ಹೈಡ್ರೋಜನ್, ಎಲೆಕ್ಟ್ರೋಲೈಸರ್ ಉತ್ಪಾದನೆಗೆ ಕೇಂದ್ರ ಸರ್ಕಾರ ಒತ್ತು- ಸಚಿವ ಪ್ರಹ್ಲಾದ್ ಜೋಶಿ
- ದಿ ರೆಸಿಸ್ಟೆನ್ಸ್ ಫ್ರಂಟ್ ಅನ್ನು ಜಾಗತಿಕ ಭಯೋತ್ಪಾದಕ ಸಂಘಟನೆ ಎಂದು ಘೋಷಿಸಿದ ಅಮೆರಿಕ
- ಪುರುಷರ ೬೫ ಕೆಜಿ ಫ್ರೀ ಸ್ಟೈಲ್ ಕುಸ್ತಿ ವಿಭಾಗದಲ್ಲಿ ಭಾರತದ ಸುಜೀತ್‌ಗೆ ಚಿನ್ನ

<><*<><>*><>

ಪಶ್ಚಿಮ ಬಂಗಾಳದ ದುರ್ಗಾಪುರದಲ್ಲಿ ೫ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿದರು. ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಈ ಯೋಜನೆಗಳು ಈ ಪ್ರದೇಶದ ಸಂಪರ್ಕವನ್ನು ಗಮನಾರ್ಹವಾಗಿ ಹೆಚ್ಚಿಸುತ್ತವೆ. ಅನಿಲ ಆಧಾರಿತ ಸಾರಿಗೆಯನ್ನು ಹೆಚ್ಚಿಸುತ್ತವೆ ಮತ್ತು ಅನಿಲ ಆಧಾರಿತ ಆರ್ಥಿಕತೆಯನ್ನು ಬೆಂಬಲಿಸುತ್ತವೆ ಎಂದರು. ವಂದೇ ಭಾರತ್ ರೈಲುಗಳು ಗಮನಾರ್ಹ ಸಂಖ್ಯೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ದೇಶದ ರಾಜ್ಯಗಳಲ್ಲಿ ಪಶ್ಚಿಮ ಬಂಗಾಳವೂ ಒಂದು. ದುರ್ಗಾಪುರ ಉಕ್ಕಿನ ನಗರ ಮಾತ್ರವಲ್ಲದೆ, ಭಾರತದ ಕಾರ್ಯಪಡೆಯ ಪ್ರಮುಖ ಕೇಂದ್ರವಾಗಿದೆ ಮತ್ತು ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೪೫ ಸೆಕೆಂಡ್ಸ್)

<><*<><>*><>

ಬಿಹಾರದ ಪೂರ್ವ ಚಂಪಾರಣ್ ಜಿಲ್ಲೆಯ ಮೋತಿಹಾರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ೭ ಸಾವಿರದ ೨೦೦ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿದರು. ರೈಲು, ರಸ್ತೆ, ಗ್ರಾಮೀಣಾಭಿವೃದ್ಧಿ, ಮೀನುಗಾರಿಕೆ, ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಕ್ಷೇತ್ರಗಳಿಗೆ ಸಂಬಂಧಿಸಿದ ಯೋಜನೆಗಳಿಗೆ ಪ್ರಧಾನಿ ಚಾಲನೆ ನೀಡಿದರು. ರೈಲು ಸಂಪರ್ಕವನ್ನು ಉತ್ತೇಜಿಸುವ ಸಲುವಾಗಿ, ನಾಲ್ಕು ಹೊಸ ಅಮೃತ್ ಭಾರತ್ ರೈಲುಗಳಿಗೆ ಪ್ರಧಾನಿ ಹಸಿರು ನಿಶಾನೆ ತೋರಿದರು. ೫೮೦ ಕೋಟಿ ರೂಪಾಯಿ ವೆಚ್ಚದ ದರ್ಭಂಗಾ-ಸಮಸ್ತಿಪುರ ಡಬ್ಲಿಂಗ್ ಯೋಜನೆ, ಸಮಸ್ತಿಪುರ-ಬಚ್ವಾರ ನಡುವೆ ಸ್ವಯಂಚಾಲಿತ ಸಿಗ್ನಲ್ ವ್ಯವಸ್ಥೆ, ಪಟ್ನಾದ ಪಾಟಲೀಪುತ್ರದಲ್ಲಿ ವಂದೇ ಭಾರತ್ ರೈಲುಗಳ ನಿರ್ವಹಣಾ ಕೇಂದ್ರ ಸೇರಿದಂತೆ ಹಲವು ರೈಲು ಕಾಮಗಾರಿಗಳು ಸೇರಿವೆ.

<><*<><>*><>

ಕೇಂದ್ರ ಸರ್ಕಾರ ಗ್ರೀನ್ ಹೈಡ್ರೋಜನ್ ಉತ್ಪಾದನೆ ಕುರಿತು ಸಂಶೋಧನೆ ಹಾಗೂ ಉತ್ಪಾದನೆಗೆ ಸಂಬಂಧಿಸಿದ ಹಾಗೆ ೨೦ ಸಾವಿರ ಕೋಟಿ ಅನುದಾನ ನೀಡಿದ್ದು, ಹೈಡ್ರೋಜನ್ ಹಾಗೂ ಎಲೆಕ್ಟ್ರೋಲೈಸರ್ ಉತ್ಪಾದನೆಗೆ ಒತ್ತು ನೀಡಲಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯ ಗ್ರೀನ್ ಹೈಡ್ರೋಜನ್ ಫೆಸಿಲಿಟಿ ಘಟಕಕ್ಕೆ ಇಂದು ಭೇಟಿ ನೀಡಿದ ಅವರು, ನಂತರ ಮಾತನಾಡಿ, ಬಯೋಮಾಸ್ ನಿಂದ ಗ್ರೀನ್ ಹೈಡ್ರೋಜನ್ ಉತ್ಪಾದನಾ ವೆಚ್ಚ ಕಡಿಮೆಗೊಳಿಸಿ, ಸಂಗ್ರಹಣಾ ವ್ಯವಸ್ಥೆಯಲ್ಲಿರುವ ಸಮಸ್ಯೆಗಳನ್ನು ಪರಿಹರಿಸಿದರೆ ಅದನ್ನು ವಾಣಿಜ್ಯ ಬಳಕೆಗೆ ತರಲು ಸರ್ಕಾರ ಪ್ರಯತ್ನಿಸಲಿದೆ ಎಂದು ಹೇಳಿದರು. ಸೂರ್ಯನ ಬೆಳಕಿನ ಮೂಲಕ ವಿದ್ಯುತ್ ಉತ್ಪಾದನೆಗೆ ಉಪಯೋಗಿಸುವ ಪಾಲಿಸಿಲಿಕಾನ್ ಅನ್ನು ಇದೀಗ ಆಮದು ಮಾಡಲಾಗುತ್ತಿದ್ದು, ಭಾರತೀಯ ವಿಜ್ಞಾನ ಸಂಸ್ಥೆಯ ವಿಜ್ಞಾನಿಗಳು ಪೆರೆಸ್ಕೈಟ್ ಎನ್ನುವ ತಂತ್ರಜ್ಞಾನವನ್ನು ಸಂಶೋಧಿಸುವಲ್ಲಿ ಲ್ಯಾಬ್ ಮಟ್ಟದಲ್ಲಿ ಯಶಸ್ವಿಯಾಗಿದ್ದಾರೆ ಎಂದು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದರು.

<><*<><>*><>

ದಿ ರೆಸಿಸ್ಟೆನ್ಸ್ ಫ್ರಂಟ್- ಟಿಆರ್‌ಎಫ್ ಅನ್ನು ವಿದೇಶಿ ಭಯೋತ್ಪಾದಕ ಸಂಘಟನೆ ಮತ್ತು ವಿಶೇಷವಾಗಿ ಗೊತ್ತುಪಡಿಸಿದ ಜಾಗತಿಕ ಭಯೋತ್ಪಾದಕ ಸಂಘಟನೆ ಎಂದು ಹೆಸರಿಸಿದ ಅಮೆರಿಕದ ನಿರ್ಧಾರವನ್ನು ಭಾರತ ಶ್ಲಾಘಿಸಿದೆ. ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆ ಲಷ್ಕರ್-ಎ-ತಯ್ಯಿಬಾದ ಪ್ರತಿನಿಧಿಯಾಗಿರುವ ಟಿಆರ್‌ಎಫ್, ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಾಗರಿಕರ ಮೇಲಿನ ದಾಳಿ ಸೇರಿದಂತೆ ಹಲವಾರು ಭಯೋತ್ಪಾದನಾ ಸಂಬಂಧಿತ ಚಟುವಟಿಕೆಗಳಲ್ಲಿ ಭಾಗಿಯಾಗಿದೆ. ಈ ನಿರ್ಧಾರಕ್ಕಾಗಿ ಅಮೆರಿಕ ವಿದೇಶಾಂಗ ಇಲಾಖೆ ಮತ್ತು ಅದರ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರನ್ನು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಶ್ಲಾಘಿಸಿದ್ದಾರೆ. ಇದು ಭಾರತ-ಅಮೆರಿಕ ಭಯೋತ್ಪಾದನಾ ನಿಗ್ರಹ ಸಹಕಾರವನ್ನು ದೃಢಪಡಿಸುತ್ತದೆ ಎಂದು ಅವರು ಹೇಳಿದರು. ಭಯೋತ್ಪಾದನೆ ವಿರುದ್ಧದ ಹೋರಾಟ ಮತ್ತು ಭಯೋತ್ಪಾದಕ ಮೂಲಸೌಕರ್ಯವನ್ನು ನಾಶಪಡಿಸುವಲ್ಲಿ ಜಾಗತಿಕ ಸಹಕಾರದ ಅಗತ್ಯವನ್ನು ಭಾರತ ನಿರಂತರವಾಗಿ ಒತ್ತಿ ಹೇಳಿದೆ. ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆಯ ನೀತಿಗೆ ಭಾರತ ಬದ್ಧವಾಗಿದೆ. ಭಯೋತ್ಪಾದಕ ಸಂಘಟನೆಗಳು ಮತ್ತು ಅವರ ಸಹಾಯಕರನ್ನು ಹೊಣೆಗಾರರನ್ನಾಗಿ ಮಾಡುವುದನ್ನು ಖಚಿತಪಡಿಸಿಕೊಳ್ಳಲು ಭಾರತ ತನ್ನ ಅಂತಾರಾಷ್ಟ್ರೀಯ ಪಾಲುದಾರರೊಂದಿಗೆ ನಿಕಟವಾಗಿ ಕೆಲಸ ಮಾಡುವುದನ್ನು ಮುಂದುವರಿಸುತ್ತದೆ ಎಂದು ಸಚಿವ ಡಾ. ಎಸ್ ಜೈಶಂಕರ್ ಹೇಳಿದರು.

<><*<><>*><>

ನೋಯ್ಡಾದಲ್ಲಿ ಇಂದು ನಡೆದ 'ರಾಷ್ಟ್ರಗಳನ್ನು ಒಗ್ಗೂಡಿಸುವ ಭಾರತದ ಅಂತಾರಾಷ್ಟ್ರೀಯ ಚಳವಳಿ' ಸಮ್ಮೇಳನವನ್ನು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಅಮೃತ ಕಾಲಕ್ಕಾಗಿ ಪಂಚ ಪ್ರತಿಜ್ಞೆಗಳ ಅಡಿಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಯಂತೆ ೨೦೪೭ ರ ವೇಳೆಗೆ ವಿಕಸಿತ ಭಾರತ ನಿರ್ಮಿಸಲು ಯುವಕರು ಸಕ್ರಿಯವಾಗಿ ಕೊಡುಗೆ ನೀಡಬೇಕೆಂದು ಒತ್ತಾಯಿಸಿದರು.

<><*<><>*><>

ಜನರನ್ನು ಸಂಪರ್ಕಿಸುವ, ಆರ್ಥಿಕ ಬೆಳವಣಿಗೆಯನ್ನು ಹೆಚ್ಚಿಸುವ ಮತ್ತು ಎಲ್ಲರಿಗೂ ಸುರಕ್ಷತೆ ಮತ್ತು ಸುಸ್ಥಿರತೆಯನ್ನು ಖಚಿತಪಡಿಸುವ ವಿಶ್ವ ದರ್ಜೆಯ ರಸ್ತೆ ಮತ್ತು ಸಾರಿಗೆ ಮೂಲಸೌಕರ್ಯವನ್ನು ನಿರ್ಮಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಖಾತೆ ರಾಜ್ಯ ಸಚಿವ ಹರ್ಷ್ ಮಲ್ಹೋತ್ರಾ ಹೇಳಿದ್ದಾರೆ. ದೆಹಲಿಯಲ್ಲಿ ಇಂದು ನಡೆದ ರಸ್ತೆ ಮತ್ತು ಹೆದ್ದಾರಿ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಕಳೆದ ೧೧ ವರ್ಷಗಳಲ್ಲಿ, ನಗರಗಳನ್ನು

ಸಂಪರ್ಕಿಸಲು, ಸಮುದಾಯಗಳನ್ನು ಸಬಲೀಕರಣಗೊಳಿಸಲು ಮತ್ತು ಹೆದ್ದಾರಿ ನಿರ್ಮಾಣದ ಅಭೂತಪೂರ್ವ ವೇಗ ಮತ್ತು ಪ್ರಮಾಣದ ಮೂಲಕ ಅಭಿವೃದ್ಧಿಯನ್ನು ವೇಗಗೊಳಿಸಲು ಸರ್ಕಾರ ಅವಿಶ್ರಾಂತವಾಗಿ ಶ್ರಮಿಸಿದೆ ಎಂದರು.

<><*<><>*><>

ಪ್ರಸಾರ ಭಾರತಿಯ ಡಿಜಿಟಲ್ ಪ್ಲಾಟ್‌ಫಾರ್ಮ್ ವೇವ್ಸ್ ಒಟಿಟಿ ನವದೆಹಲಿಯ ಆಕಾಶವಾಣಿ ಭವನದಲ್ಲಿಂದು ತನ್ನ ಚಲನಚಿತ್ರ ಡೆಲ್ಲಾ ಬೆಲ್ಲಾ ಬದ್ಲೇಗಿ ಕಹಾನಿಯ ಪ್ರಥಮ ಪ್ರದರ್ಶನವನ್ನು ಆಯೋಜಿಸಿತ್ತು. ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಸೆಹಗಲ್, ವೇವ್ಸ್ ಒಟಿಟಿ ಡಿಜಿಟಲ್ ನಾವೀನ್ಯತೆಯೊಂದಿಗೆ ಪರಂಪರೆಯನ್ನು ಸಂಯೋಜಿಸುವ ಭಾರತದ ಏಕೈಕ ಸಾರ್ವಜನಿಕ ಸೇವಾ ಸ್ಟ್ರೀಮಿಂಗ್ ವೇದಿಕೆಯಾಗಿದೆ ಎಂದು ಹೇಳಿದರು.

<><*<><>*><>

ಉದ್ಯೋಗಕ್ಕಾಗಿ ಭೂಮಿ ಹಗರಣಕ್ಕೆ ಸಂಬಂಧಿಸಿದಂತೆ ವಿಚಾರಣಾ ನ್ಯಾಯಾಲಯದ ವಿಚಾರಣೆಗೆ ತಡೆ ನೀಡುವಂತೆ ಕೋರಿ ಆರ್‌ಜೆಡಿ ನಾಯಕ ಲಾಲು ಪ್ರಸಾದ್ ಯಾದವ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು ತಿರಸ್ಕರಿಸಿದೆ. ವಿಚಾರಣೆಗೆ ತಡೆ ನೀಡಲು ದೆಹಲಿ ಹೈಕೋರ್ಟ್ ನಿರಾಕರಿಸಿದ್ದನ್ನು ಪ್ರಶ್ನಿಸಿ ಲಾಲು ಪ್ರಸಾದ್ ಯಾದವ್ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದರು. ಭ್ರಷ್ಟಾಚಾರ ತಡೆ ಕಾಯ್ದೆಯಡಿಯಲ್ಲಿ ಸರಿಯಾದ ಅನುಮತಿಯಿಲ್ಲದೆ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಲಾಲು ಪ್ರಸಾದ್ ಪರ ವಕೀಲರು ವಾದಿಸಿದರು. ನ್ಯಾಯಮೂರ್ತಿಗಳಾದ ಎಂ.ಎಂ.ಸುಂದ್ರೇಶ್ ಮತ್ತು ಎನ್.ಕೋಟೀಶ್ವರ್ ಸಿಂಗ್ ಅವರನ್ನು ಒಳಗೊಂಡ ನ್ಯಾಯಪೀಠ, ಈ ವಿಷಯವನ್ನು ಸುಪ್ರೀಂ ಕೋರ್ಟ್ ಅಲ್ಲ, ಹೈಕೋರ್ಟ್ ನಿಭಾಯಿಸಬೇಕು ಎಂದು ಹೇಳಿದೆ. ದೆಹಲಿ ಹೈಕೋರ್ಟ್ ಈ ಹಿಂದೆ ಲಾಲು ಪ್ರಸಾದ್ ಅವರಿಗೆ ವಿಚಾರಣಾ ನ್ಯಾಯಾಲಯದ ಮುಂದೆ ತಮ್ಮ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಿತ್ತು. ಆದರೆ ವಿಚಾರಣೆಗೆ ತಡೆಯಾಜ್ಞೆ ನೀಡಲು ನಿರಾಕರಿಸಿತ್ತು. ಸುಪ್ರೀಂ ಕೋರ್ಟ್ ಮಧ್ಯಪ್ರವೇಶಿಸಲು ನಿರಾಕರಿಸಿದ್ದರಿಂದ, ಉದ್ಯೋಗಕ್ಕಾಗಿ ಭೂಮಿ ಪ್ರಕರಣದ ವಿಚಾರಣೆ ಈಗ ವಿಚಾರಣಾ ನ್ಯಾಯಾಲಯದಲ್ಲಿ ಮುಂದುವರಿಯಲಿದೆ.

<><*<><>*><>

ಇತ್ತೀಚೆಗೆ ಅಮೆರಿಕದಲ್ಲಿ ಮುಕ್ತಾಯಗೊಂಡ ೨೧ನೇ ವಿಶ್ವ ಪೊಲೀಸ್ ಮತ್ತು ಅಗ್ನಿಶಾಮಕ ಕ್ರೀಡಾಕೂಟದಲ್ಲಿ ಪಾಲ್ಗೊಂಡು ಮಹತ್ವದ ಸಾಧನೆ ಮಾಡಿದ ಭಾರತ ತಂಡಕ್ಕೆ ದೆಹಲಿಯಲ್ಲಿಂದು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅಭಿನಂದಿಸಿದರು.  ಬಳಿಕ ಮಾತನಾಡಿದ ಅವರು, ವಿಶ್ವ ಪೊಲೀಸ್ ಮತ್ತು ಅಗ್ನಿಶಾಮಕ ಕ್ರೀಡಾಕೂಟದಲ್ಲಿ ಭಾರತೀಯ ತಂಡ ಮಾಡಿರುವ ಅದ್ಭುತ ಸಾಧನೆಗಳ ಬಗ್ಗೆ ರಾಷ್ಟ್ರ ಹೆಮ್ಮೆಪಡುತ್ತದೆ ಎಂದು ಹೇಳಿದರು.

<><*<><>*><>

ಹಂಗೇರಿಯ ಬುಡಾಪೆಸ್ಟ್‌ನಲ್ಲಿ ಇಂದು ನಡೆದ ಪಾಲಿಯಕ್ ಇಮ್ರೆ ಮತ್ತು ವರ್ಗಾ ಜಾನೋಸ್ ಸ್ಮಾರಕ ಕುಸ್ತಿ ಪಂದ್ಯಾವಳಿಯಲ್ಲಿ ಪುರುಷರ ೬೫ ಕೆಜಿ ಫ್ರೀಸ್ಟೈಲ್ ವಿಭಾಗದಲ್ಲಿ ಭಾರತೀಯ ಕುಸ್ತಿಪಟು ಸುಜೀತ್ ಕಲ್ಕಲ್ ಚಿನ್ನದ ಪದಕ ಗೆದ್ದರು. ಪುರುಷರ ೫೭ ಕೆಜಿ ಫ್ರೀಸ್ಟೈಲ್ ವಿಭಾಗದಲ್ಲಿ ಭಾರತ, ಕಂಚಿನ ಪದಕವನ್ನು ಸಹ ಪಡೆದುಕೊಂಡಿತು. ಪಂದ್ಯದಲ್ಲಿ ರಾಹುಲ್, ಜರ್ಮನಿಯ ನಿಕ್ಲಾಸ್ ಸ್ಟೆಚೆಲ್ ಅವರನ್ನು ೪-೦ ಅಂತರದಿಂದ ಸೋಲಿಸಿದರು.

<><*<>ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು  <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>